# ವಿಡಿಐಟಿಯಲ್ಲಿ ನೂತನ ತಂತ್ರಜ್ಞಾನಗಳ ಕುರಿತು ಮಾಹಿತಿ ಕಾರ್ಯಕ್ರಮಗಳು ಯಶಸ್ವಿ

## ವಿಧಿ ವಿಜ್ಞಾನ ಕ್ಷೇತ್ರದಲ್ಲಿ ಸೈಬರ್ ಸುರಕ್ಷತೆಯ ಕುರಿತಾಗಿ ಮಾಹಿತಿ ನೀಡಿದ ಕೌಶಿಕ್ ಜಿ. ಎನ್.




**ಕೊಂಕಣವಾಹಿನಿ ನ್ಯೂಸ್,**
**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಸೈಬರ್ ವಿಧಿ ವಿಜ್ಞಾನ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮ ಮಂಗಳವಾರ ನಡೆಯಿತು.

ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರಾದ ಕೌಶಿಕ್ ಜಿ. ಎನ್. ಆಗಮಿಸಿದ್ದರು. ವಿಧಿ ವಿಜ್ಞಾನ ಕ್ಷೇತ್ರದಲ್ಲಿ ಸೈಬರ್ ಸುರಕ್ಷತೆಯ ಕುರಿತಾಗಿ ವಿವರಿಸಿದರು. ಇತ್ತೀಚಿನ ದಿನಗಳಲ್ಲಿ ಸೈಬರ್ ವಂಚನೆ ಪ್ರಕರಣಗಳು ಅಧಿಕವಾಗುತ್ತಿರುವುದರಿಂದ ಅಂತರ್ಜಾಲ ಬಳಸುವಾಗ ಜಾಗರೂಕರಾಗಿರುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ವೆಂಕಟೇಶ ಶಂಕರ್ ಸೈಬರ್ ಕ್ಷೇತ್ರದಲ್ಲಿ ಆಗುತ್ತಿರುವ ಆಗುಹೋಗುಗಳನ್ನು ತಿಳಿದುಕೊಳ್ಳಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಹೇಳಿದರು.

ಕಂಪ್ಯೂಟರ್ ಸೈನ್ಸ್ (ಎ ಐ ಆಂಡ್ ಎಂ ಎಲ್) ಮುಖ್ಯಸ್ಥೆ ಡಾ. ಪೂರ್ಣಿಮ ರಾಯ್ಕರ್ ಸ್ವಾಗತಿಸಿದರು. ಪ್ರೊ. ಅಮರನಾಥ ಎಸ್ ಕಾರ್ಯಕ್ರಮ ಆಯೋಜಿಸಿದ್ದರು. ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ (ಎಐ ಆಂಡ್ ಎಂಎಲ್) ಜಂಟಿ ಸಯೋಗದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ವಿದ್ಯಾರ್ಥಿಗಳು ಇದ್ದರು.

ಮೆಕ್ಯಾನಿಕಲ್ ವಿಭಾಗವು "ಇಂಡಸ್ಟ್ರಿ 4.0 " ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಆಯೋಜಿಸಿತ್ತು. ಟಾಟಾ ಮೋಟಾರ್ಸ್ ಲಿಮಿಟೆಡ್ ಧಾರವಾಡದ ಹಿರಿಯ ಕಾರ್ಯನಿರ್ವಾಹಕ ಹಾಗೂ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ದೀಪಕ್ ಪಾಟೀಲ್ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಕೈಗಾರಿಕಾ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನಗಳಾದ ಯಂತ್ರ ಕಲಿಕೆ, ಕೃತಕ ಬುದ್ಧಿಮತ್ತೆ ಹಾಗೂ ಐ ಒ ಟಿ ತಂತ್ರಜ್ಞಾನವನ್ನು ಹೇಗೆ ಸಮರ್ಪಕವಾಗಿ ಬಳಸಲಾಗುತ್ತಿದೆ ಎಂದು ವಿವರಿಸಿದರು. ಯಂತ್ರಗಳ ದಕ್ಷತೆ ಹೆಚ್ಚಿಸಿ, ಮಾಲಿನ್ಯ ತಗ್ಗಿಸಲು ಬಳಸಲಾಗುತ್ತಿರುವ ಉಪಕ್ರಮಗಳ ವಿವರಣೆ ನೀಡಿದರು. ವಿಭಾಗ ಮುಖ್ಯಸ್ಥ ಡಾ. ಕೆ ಎಸ್ ಪೂಜಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ ಕೈಗಾರಿಕಾ ಕ್ಷೇತ್ರದಲ್ಲಿನ ನೂತನ ಬೆಳವಣಿಗೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಪ್ರೊ. ಗುರುರಾಜ ಸತ್ತಿಗೇರಿ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ನಾವಿನ್ಯತಾ ಮಂಡಳಿಯ ಜಂಟಿ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಸಂಶೋಧನಾ ಕ್ಷೇತ್ರದಲ್ಲಿನ ಮಹತ್ತರ ಬೆಳವಣಿಗೆಯ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವು ಆ.29ರಂದು ಜರುಗಿತು. ಭಾರತೀಯ ಸಂಶೋಧನಾ ಮತ್ತು ರಕ್ಷಣಾ ಸಂಸ್ಥೆಯ ಮಾಜಿ ನಿರ್ದೇಶಕರು ಹಾಗೂ ಖ್ಯಾತ ವಿಜ್ಞಾನಿಯಾದ ಎಸ್ ಎ ಕಟ್ಟಿಯವರು ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ವಿದ್ಯಾರ್ಥಿಗಳು ಸಂಶೋಧನಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೇಶದ ಏಳಿಗೆಗೆ ಶ್ರಮಿಸಬೇಕೆಂದು ಹೇಳಿದರು. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಹೊಂದಲು ಇಂಜಿನಿಯರಿಂಗ್ ವಿದ್ಯಾರ್ಥಿಗಳು ವಿನೂತನ ತಂತ್ರಜ್ಞಾನದ ಮುಖಾಂತರ ಸಂಶೋಧನೆಗೆ ಒತ್ತು ನೀಡಬೇಕೆಂದು ಹೇಳಿದರು. ವಿಭಾಗ ಮುಖ್ಯಸ್ಥ ಡಾ. ಮಹೇಂದ್ರ ದೀಕ್ಷಿತ್ ಸ್ವಾಗತಿಸಿದರು. ಡಾ. ನಾಗರಾಜ್ ಭಟ್ ವಂದಿಸಿದರು. ಪ್ರೊ. ರಾಜೇಶ್ವರಿ ಪಿ ನಿರೂಪಿಸಿದರು. 60ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕೈಗಾರಿಕಾ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಬಳಸಲಾಗುತ್ತಿರುವ ತಂತ್ರಜ್ಞಾನದ ಕುರಿತಾಗಿ ವಿದ್ಯಾರ್ಥಿಗಳಿಗೆ ತಿಳಿಸಿ, ಹಾಗೂ ಕೈಗಾರಿಕಾ ಕ್ಷೇತ್ರವು ಎದುರಿಸುತ್ತಿರುವ ಸವಾಲುಗಳ ಪರಿಚಯ ನೀಡಿ ವಿದ್ಯಾರ್ಥಿಗಳು ಈ ದಿಶೆಯಲ್ಲಿ ಕಾರ್ಯ ಪ್ರವೃತ್ತರಾಗಲು ಇಂತಹ ಕಾರ್ಯಗಾರಗಳನ್ನು ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

September 4, 2025

# ನೂತನ ತಂತ್ರಜ್ಞಾನ ಮಾಹಿತಿ ಕಾರ್ಯಕ್ರಮ ಯಶಸ್ವಿ



**»ಜನಮಾಧ್ಯಮ, ಹಳಿಯಾಳ:** ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ, ಸೈಬರ್ ವಿಧಿ ವಿಜ್ಞಾನ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮ ಸಪ್ಟೆಂಬರ್ 2ರಂದು ಜರುಗಿತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರಾದ ಕೌಶಿಕ್ ಜಿ. ಎನ್. ಆಗಮಿಸಿದ್ದರು. ವಿಧಿ ವಿಜ್ಞಾನ ಕ್ಷೇತ್ರದಲ್ಲಿ ಸೈಬರ್ ಸುರಕ್ಷತೆ ಕುರಿತಾಗಿ ವಿವರಿಸಿದರು. ಇತ್ತೀಚಿನ ದಿನಗಳಲ್ಲಿ ಸೈಬರ್ ವಂಚನೆ ಪ್ರಕರಣಗಳು ಅಧಿಕವಾಗುತ್ತಿರುವುದರಿಂದ ಅಂತರ್ಜಾಲ ಬಳಸುವಾಗ ಜಾಗರೂಕರಾಗಿರುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ವೆಂಕಟೇಶ ಶಂಕರ್ ಸೈಬರ್ ಕ್ಷೇತ್ರದಲ್ಲಿ ಆಗುತ್ತಿರುವ ಆಗುಹೋಗುಗಳನ್ನು ತಿಳಿದುಕೊಳ್ಳಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಹೇಳಿದರು. ಕಂಪ್ಯೂಟರ್ ಸೈನ್ಸ್ (ಎ ಐ ಆಂಡ್ ಎಂ ಎಲ್) ಮುಖ್ಯಸ್ಥೆ ಡಾ. ಪೂರ್ಣಿಮ ರಾಯ್ಕರ್ ಸ್ವಾಗತಿಸಿದರು. ಪ್ರೊ. ಅಮರನಾಥ ಎಸ್. ಕಾರ್ಯಕ್ರಮ ಆಯೋಜಿಸಿದ್ದರು. ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ (ಎ ಐ ಆಂಡ್ ಎಂ ಎಲ್) ಜಂಟಿ ಸಯೋಗದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೆಕ್ಯಾನಿಕಲ್ ವಿಭಾಗವು "ಇಂಡಸ್ಟ್ರಿ- 4.0" ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಸಪ್ಟೆಂಬರ್ 2 ರಂದು ಆಯೋಜಿಸಿತ್ತು. ಟಾಟಾ ಮೋಟಾರ್ಸ್ ಲಿ., ಧಾರವಾಡದ ಹಿರಿಯ ಕಾರ್ಯನಿರ್ವಾಹಕ ಹಾಗೂ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ದೀಪಕ್ ಪಾಟೀಲ್ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಕೈಗಾರಿಕಾ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನಗಳಾದ ಯಂತ್ರ ಕಲಿಕೆ, ಕೃತಕ ಬುದ್ಧಿಮತ್ತೆ ಹಾಗೂ ಐ ಒ ಟಿ ತಂತ್ರಜ್ಞಾನವನ್ನು ಹೇಗೆ ಸಮರ್ಪಕವಾಗಿ ಬಳಸಲಾಗುತ್ತಿದೆ ಎಂದು ವಿವರಿಸಿದರು. ಯಂತ್ರಗಳ ದಕ್ಷತೆ ಹೆಚ್ಚಿಸಿ, ಮಾಲಿನ್ಯ ತಗ್ಗಿಸಲು ಬಳಸಲಾಗುತ್ತಿರುವ ಉಪಕ್ರಮಗಳ ವಿವರಣೆ ನೀಡಿದರು. ವಿಭಾಗ ಮುಖ್ಯಸ್ಥ ಡಾ. ಕೆ. ಎಸ್. ಪೂಜಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ ಕೈಗಾರಿಕಾ ಕ್ಷೇತ್ರದಲ್ಲಿನ ನೂತನ ಬೆಳವಣಿಗೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಪ್ರೊ. ಗುರುರಾಜ ಸತ್ತಿಗೇರಿ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ನಾವಿನ್ಯತಾ ಮಂಡಳಿಯ ಜಂಟಿ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಸಂಶೋಧನಾ ಕ್ಷೇತ್ರದಲ್ಲಿನ ಮಹತ್ತರ ಬೆಳವಣಿಗೆಯ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವು ಆಗಸ್ಟ್ 29ರಂದು ಜರುಗಿತು. ಭಾರತೀಯ ಸಂಶೋಧನಾ ಮತ್ತು ರಕ್ಷಣಾ ಸಂಸ್ಥೆಯ ಮಾಜಿ ನಿರ್ದೇಶಕರು ಹಾಗೂ ಖ್ಯಾತ ವಿಜ್ಞಾನಿಯಾದ ಎಸ್. ಎ. ಕಟ್ಟಿಯವರು ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ವಿದ್ಯಾರ್ಥಿಗಳು ಸಂಶೋಧನಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೇಶದ ಏಳಿಗೆಗೆ ಶ್ರಮಿಸಬೇಕೆಂದು ಹೇಳಿದರು. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಹೊಂದಲು ಇಂಜಿನಿಯರಿಂಗ್ ವಿದ್ಯಾರ್ಥಿಗಳು ವಿನೂತನ ತಂತ್ರಜ್ಞಾನದ ಮುಖಾಂತರ ಸಂಶೋಧನೆಗೆ ಒತ್ತು ನೀಡಬೇಕೆಂದು ಹೇಳಿದರು. ವಿಭಾಗ ಮುಖ್ಯಸ್ಥ ಡಾ. ಮಹೇಂದ್ರ ದೀಕ್ಷಿತ್ ಸ್ವಾಗತಿಸಿದರು. ಡಾ. ನಾಗರಾಜ್ ಭಟ್ ವಂದಿಸಿದರು. ಪ್ರೊ. ರಾಜೇಶ್ವರಿ ಪಿ. ನಿರೂಪಿಸಿದರು. 60ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕೈಗಾರಿಕಾ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಬಳಸಲಾಗುತ್ತಿರುವ ತಂತ್ರಜ್ಞಾನದ ಕುರಿತಾಗಿ ವಿದ್ಯಾರ್ಥಿಗಳಿಗೆ ತಿಳಿಸಿ ಹಾಗೂ ಕೈಗಾರಿಕಾ ಕ್ಷೇತ್ರವು ಎದುರಿಸುತ್ತಿರುವ ಸವಾಲುಗಳ ಪರಿಚಯ ನೀಡಿ ವಿದ್ಯಾರ್ಥಿಗಳು ಈ ದಿಶೆಯಲ್ಲಿ ಕಾರ್ಯ ಪ್ರವೃತ್ತರಾಗಲು ಇಂತಹ ಕಾರ್ಯಗಾರಗಳನ್ನು ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೈಗಾರಿಕೆ, ಸಂಶೋಧನಾ ಕ್ಷೇತ್ರದ ಬದಲಾವಣೆ ಅರಿವು ಅಗತ್ಯ




ಹಳಿಯಾಳ, ಸೆ. 03: ಪ್ರಸ್ತುತ್ ವೇಗವಾಗಿ ಬೆಳೆಯುತ್ತಿರುವ ಪ್ರಪಂಚದಲ್ಲಿ ಕೈಗಾರಿಕಾ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಬಳಸಲಾಗುತ್ತಿರುವ ತಂತ್ರಜ್ಞಾನದ ಕುರಿತ ಅಗತ್ಯ ಮಾಹಿತಿ ಮತ್ತು ಅರಿವೂವಿದ್ಯಾರ್ಥಿಗಳಿಗೆ ಅಗತ್ಯ ಎಂದು ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಹೇಳಿದರು.

ಇಲ್ಲಿನ ಕರ್ನಾಟಕ ಲಾ ಸೊಸೈಟಿ ವಿಶ್ವನಾಥರಾವ ದೇಶಪಾಂಡೆ ಎಂಜೀನಿಯರಿಂಗ್ ಕಾಲೇಜಿನಲ್ಲಿ ನಡೆದ ಸೈಬರ್ ವಿಧಿ ವಿಜ್ಞಾನ ಕುರಿತ ಮಾಹಿತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಕೈಗಾರಿಕಾ ಕ್ಷೇತ್ರ ಎದುರಿಸುತ್ತಿರುವ ಸವಾಲುಗಳ ಪರಿಚಯ ನೀಡಿ, ಅದರ ಬದಲಾವಣೆ ದಿಸೆಯಲ್ಲಿ ಕಾರ್ಯ ಪ್ರವೃತ್ತರಾಗಲು ಆಯೋಜಿಸಿದ ಇಂತಹ ಮಾಹಿತಿ ಕಾರ್ಯಾಗಾರದ ಲಾಭ ಪಡೆದುಕೊಂಡು ಭವಿಷ್ಯ ಕಟ್ಟಿಕೊಳ್ಳಿ ಎಂದರು.

ಸಂಪನ್ಮೂಲ ವ್ಯಕ್ತಿ ಧಾರವಾಡದ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯ ಪ್ರಾಧ್ಯಾಪಕ ಜಿ. ಎನ್. ಕೌಶಿಕ್ ಮಾತನಾಡಿ, ವಿಧಿ ವಿಜ್ಞಾನ ಕ್ಷೇತ್ರದಲ್ಲಿ ಸೈಬರ್ ಸುರಕ್ಷತೆ ಕುರಿತು ಸಮಗ್ರ ಮಾಹಿತಿ ನೀಡಿ, ಇತ್ತೀಚಿನ ದಿನಗಳಲ್ಲಿ ಸೈಬರ್ ವಂಚನೆ ಪ್ರಕರಣಗಳು ಅಧಿಕವಾಗುತ್ತಿದ್ದು, ಅಂತರಜಾಲ ಬಳಸುವಾಗ ಜಾಗರೂಕರಾಗಿರುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ವೆಂಕಟೇಶ ಶಂಕರ್ ಸೈಬರ್ ಕ್ಷೇತ್ರದಲ್ಲಿ ಆಗುತ್ತಿರುವ ಆಗುಹೋಗುಗಳನ್ನು ತಿಳಿದುಕೊಳ್ಳಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದರು.

ಕಂಪ್ಯೂಟರ್ ಸೈನ್ಸ್ (ಎ ಐ ಆಂಡ್ ಎಂ ಎಲ್) ಮುಖ್ಯಸ್ಥೆ ಡಾ. ಪೂರ್ಣಿಮ ರಾಯ್ಕರ್ ಸ್ವಾಗತಿಸಿದರು. ಪ್ರೊ, ಅಮರನಾಥ ಎಸ್ ಕಾರ್ಯಕ್ರಮ ಆಯೋಜಿಸಿದ್ದರು. ಕಂಪ್ಯೂಟರ್ ಸೈನ್ಸ್ ಮತ್ತು ಎಐ ಆಂಡ್ ಎಂಎಲ್ ವಿಭಾಗ ಜಂಟಿಯಾಗಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 150 ಕ್ಕೂ ಅಧಿಕ ವಿದ್ಯಾರ್ಥಿಗಳು ಇದ್ದರು.

ಮೆಕ್ಯಾನಿಕಲ್ ವಿಭಾಗ: ವತಿಯಿಂದ "ಇಂಡಸ್ಟ್ರಿ 4.0 " ಕುರಿತ ಮಾಹಿತಿ ನೀಡುವ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಧಾರವಾಡ ಟಾಟಾ ಮೋಟಾರ್ಸ್ ಲಿಮಿಟೆಡ್ ಹಿರಿಯ ಕಾರ್ಯನಿರ್ವಾಹಕ ಹಾಗೂ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ದೀಪಕ್ ಪಾಟೀಲ್ ಮಾತನಾಡಿ, ಕೈಗಾರಿಕಾ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನಗಳಾದ ಯಂತ್ರ ಕಲಿಕೆ, ಕೃತಕ ಬುದ್ಧಿಮತ್ತೆ ಹಾಗೂ ಐ ಒ ಟಿ ತಂತ್ರಜ್ಞಾನವನ್ನು ಹೇಗೆ ಸಮರ್ಪಕವಾಗಿ ಬಳಸಲಾಗುತ್ತಿದೆ ಎಂದು ವಿವರಿಸಿ, ಯಂತ್ರಗಳ ದಕ್ಷತೆ ಹೆಚ್ಚಿಸಿ, ಮಾಲಿನ್ಯ ತಗ್ಗಿಸಲು ಬಳಸಲಾಗುತ್ತಿರುವ ಉಪಕ್ರಮಗಳ ವಿವರಣೆ ನೀಡಿದರು.

ವಿಭಾಗ ಮುಖ್ಯಸ್ಥ ಡಾ. ಕೆ ಎಸ್ ಪೂಜಾರ್ ಮಾತನಾಡಿ, ಕೈಗಾರಿಕಾ ಕ್ಷೇತ್ರದ ನೂತನ ಬೆಳವಣಿಗೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ ಎಂದರು.

ಪ್ರೊ, ಗುರುರಾಜ ಸತ್ತಿಗೇರಿ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಇದ್ದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗ: ವತಿಯಿಂದ ನಾವಿನ್ಯತಾ ಮಂಡಳಿಯ ಜಂಟಿ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಸಂಶೋಧನಾ ಕ್ಷೇತ್ರದಲ್ಲಿನ ಮಹತ್ತರ ಬೆಳವಣಿಗೆಯ ಕುರಿತ ಅರಿವು ಮೂಡಿಸುವ ಕಾರ್ಯಕ್ರಮವು ಈಚೆಗೆ ಜರುಗಿತು.

ಭಾರತೀಯ ಸಂಶೋಧನಾ ಮತ್ತು ರಕ್ಷಣಾ ಸಂಸ್ಥೆಯ ಮಾಜಿ ನಿರ್ದೇಶಕರು ಹಾಗೂ ಖ್ಯಾತ ವಿಜ್ಞಾನಿ ಎಸ್ ಎ ಕಟ್ಟಿಯವರು ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ಮಾತನಾಡಿ, ವಿದ್ಯಾರ್ಥಿಗಳು ಸಂಶೋಧನಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೇಶದ ಏಳಿಗೆಗೆ ಶ್ರಮಿಸಬೇಕು. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಹೊಂದಲು ಇಂಜಿನಿಯರಿಂಗ್ ವಿದ್ಯಾರ್ಥಿಗಳು ವಿನೂತನ ತಂತ್ರಜ್ಞಾನದ ಮುಖಾಂತರ ಸಂಶೋಧನೆಗೆ ಒತ್ತು ನೀಡಬೇಕು ಎಂದರು.

ವಿಭಾಗ ಮುಖ್ಯಸ್ಥ ಡಾ. ಮಹೇಂದ್ರ ದೀಕ್ಷಿತ್ ಸ್ವಾಗತಿಸಿದರು. ಡಾ. ನಾಗರಾಜ್ ಭಟ್ ವಂದಿಸಿದರು. ಪ್ರೊ, ರಾಜೇಶ್ವರಿ ಪಿ ನಿರೂಪಿಸಿದರು. 60ಕ್ಕೂ ಅಧಿಕ ವಿದ್ಯಾರ್ಥಿಗಳು ಇದ್ದರು.


Powered By KHUSHIHOST ® | License - ePaperCloud.com

# ನೂತನ ತಂತ್ರಜ್ಞಾನಗಳ ಮಾಹಿತಿ ಕಾರ್ಯಕ್ರಮ

**ಹಳಿಯಾಳ:** ಕೆ.ಎಲ್.ಎಸ್ ವಿ.ಡಿ.ಐ.ಟಿ ಕಾಲೇಜು ತನ್ನ ವಿದ್ಯಾರ್ಥಿಗಳಿಗೆ ಕೈಗಾರಿಕಾ ಹಾಗೂ ಸಂಶೋಧನಾ ಕ್ಷೇತ್ರಗಳಲ್ಲಿನ ಹೊಸ ತಂತ್ರಜ್ಞಾನಗಳ ಕುರಿತು ಅರಿವು ಮೂಡಿಸಲು ಇತ್ತೀಚೆಗೆ ಹಲವು ಮಾಹಿತಿ ಕಾರ್ಯಕ್ರಮಗಳನ್ನು ಆಯೋಜಿಸಿತ್ತು.

ಕಾಲೇಜು ಪ್ರಾಂಶುಪಾಲರಾದ ಡಾ. ವಿ. ಎ. ಕುಲಕರ್ಣಿ ಅವರು, ವಿದ್ಯಾರ್ಥಿಗಳು ಈ ಕಾರ್ಯಕ್ರಮಗಳ ಮೂಲಕ ಕೈಗಾರಿಕೆಗಳು ಎದುರಿಸುತ್ತಿರುವ ಸವಾಲುಗಳನ್ನು ಅರಿತುಕೊಂಡು ಆ ನಿಟ್ಟಿನಲ್ಲಿ ಕೆಲಸ ಮಾಡಲು ಪ್ರೇರೇಪಿಸುವುದು ಈ ಕಾರ್ಯಕ್ರಮಗಳ ಮುಖ್ಯ ಉದ್ದೇಶ ಎಂದು ತಿಳಿಸಿದರು.




ಸೈಬರ್ ವಿಧಿ ವಿಜ್ಞಾನ ಕಾರ್ಯಕ್ರಮ: ಕಂಪ್ಯೂಟರ್ ಸೈನ್ಸ್ ವಿಭಾಗವು (ಎ.ಐ ಎಂ.ಎಲ್) ಸೆಪ್ಟೆಂಬರ್ 2 ರಂದು ಸೈಬರ್ ವಿಧಿ ವಿಜ್ಞಾನ ಕುರಿತು ಕಾರ್ಯಕ್ರಮವನ್ನು ಆಯೋಜಿಸಿತ್ತು. ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರಾದ ಕೌಶಿಕ್ ಜಿ. ಎನ್. ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ, ಸೈಬರ್ ವಂಚನೆಗಳ ಬಗ್ಗೆ ಎಚ್ಚರಿಕೆ ನೀಡಿದರು. ಸೈಬರ್ ಸುರಕ್ಷತೆಯ ಪ್ರಾಮುಖ್ಯತೆ ಮತ್ತು ಅಂತರ್ಜಾಲ ಬಳಸುವಾಗ ಅನುಸರಿಸಬೇಕಾದ ಮುನ್ನೆಚ್ಚರಿಕೆಗಳ ಕುರಿತು ಅವರು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥರಾದ ಡಾ. ವೆಂಕಟೇಶ ಶಂಕರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಕಾರ್ಯಕ್ರಮದಲ್ಲಿ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಇಂಡಸ್ಟ್ರಿ 4.0 ಕುರಿತು ಕಾರ್ಯಾಗಾರ: ಮೆಕ್ಯಾನಿಕಲ್ ವಿಭಾಗವು ಸೆಪ್ಟೆಂಬರ್ 2 ರಂದು ಇಂಡಸ್ಟ್ರಿ 4.0 ಬಗ್ಗೆ ಕಾರ್ಯಾಗಾರ ಆಯೋಜಿಸಿತ್ತು. ಕಾಲೇಜಿನ ಹಳೆಯ ವಿದ್ಯಾರ್ಥಿಯೂ ಆಗಿರುವ ಟಾಟಾ ಮೋಟಾರ್ಸ್ ಲಿಮಿಟೆಡ್ ಧಾರವಾಡದ ಹಿರಿಯ ಕಾರ್ಯನಿರ್ವಾಹಕ ದೀಪಕ್ ಪಾಟೀಲ್ ಅವರು ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಯಂತ್ರ ಕಲಿಕೆ, ಕೃತಕ ಬುದ್ಧಿಮತ್ತೆ ಮತ್ತು ಐಒಟಿ ತಂತ್ರಜ್ಞಾನಗಳನ್ನು ಕೈಗಾರಿಕಾ ಕ್ಷೇತ್ರದಲ್ಲಿ ಹೇಗೆ ಬಳಸಲಾಗುತ್ತಿದೆ ಎಂಬುದನ್ನು ಅವರು ವಿವರಿಸಿದರು. ಯಂತ್ರಗಳ ದಕ್ಷತೆ ಹೆಚ್ಚಿಸುವುದು ಮತ್ತು ಮಾಲಿನ್ಯ ತಗ್ಗಿಸಲು ಕೈಗೊಳ್ಳಲಾಗುತ್ತಿರುವ ಕ್ರಮಗಳ ಕುರಿತು ಅವರು ವಿವರಣೆ ನೀಡಿದರು. ಈ ಕಾರ್ಯಕ್ರಮದಲ್ಲಿ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಜರಿದ್ದರು.

ಸಂಶೋಧನೆ ಕುರಿತು ಜಾಗೃತಿ ಕಾರ್ಯಕ್ರಮ: ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ಆಗಸ್ಟ್ 29 ರಂದು ನಾವಿನ್ಯತಾ ಮಂಡಳಿಯ ಸಹಯೋಗದೊಂದಿಗೆ ಸಂಶೋಧನಾ ಕ್ಷೇತ್ರದ ಬಗ್ಗೆ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿತು. ಭಾರತೀಯ ಸಂಶೋಧನಾ ಮತ್ತು ರಕ್ಷಣಾ ಸಂಸ್ಥೆಯ ಮಾಜಿ ನಿರ್ದೇಶಕ ಹಾಗೂ ಖ್ಯಾತ ವಿಜ್ಞಾನಿ ಎಸ್.ಎ. ಕಟ್ಟಿ ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದರು. ಇಂಜಿನಿಯರಿಂಗ್ ವಿದ್ಯಾರ್ಥಿಗಳು ಸಂಶೋಧನೆಯಲ್ಲಿ ತೊಡಗಿಸಿಕೊಂಡು, ನೂತನ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವ ಮೂಲಕ ದೇಶದ ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಲು ಕೊಡುಗೆ ನೀಡಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಈ ಕಾರ್ಯಕ್ರಮದಲ್ಲಿ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನೂತನ ತಂತ್ರಜ್ಞಾನಗಳ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮ ಯಶಸ್ವಿ



**ಹಳ್ಳಿಯ ಸಂದೇಶ ನ್ಯೂಸ್**

ಹಳಿಯಾಳ: ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಸೈಬರ್ ವಿಧಿ ವಿಜ್ಞಾನ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮ ಸಪ್ಟೆಂಬರ್ 2ರಂದು ಜರುಗಿತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರಾದ ಕೌಶಿಕ್ ಜಿ ಎನ್ ಆಗಮಿಸಿದ್ದರು. ವಿಧಿ ವಿಜ್ಞಾನ ಕ್ಷೇತ್ರದಲ್ಲಿ ಸೈಬರ್ ಸುರಕ್ಷತೆಯ ಕುರಿತಾಗಿ ವಿವರಿಸಿದರು. ಇತ್ತೀಚಿನ ದಿನಗಳಲ್ಲಿ ಸೈಬರ್ ವಂಚನೆ ಪ್ರಕರಣಗಳು ಅಧಿಕವಾಗುತ್ತಿರುವುದರಿಂದ ಅಂತರ್ಜಾಲ ಬಳಸುವಾಗ ಜಾಗರೂಕರಾಗಿರುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ವೆಂಕಟೇಶ ಶಂಕರ್ ಸೈಬರ್ ಕ್ಷೇತ್ರದಲ್ಲಿ ಆಗುತ್ತಿರುವ ಆಗುಹೋಗುಗಳನ್ನು ತಿಳಿದುಕೊಳ್ಳಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಹೇಳಿದರು. ಕಂಪ್ಯೂಟರ್ ಸೈನ್ಸ್ (ಎ ಐ ಆಂಡ್ ಎಂ ಎಲ್) ಮುಖ್ಯಸ್ಥೆ ಡಾ. ಪೂರ್ಣಿಮ ರಾಯ್ಕರ್ ಸ್ವಾಗತಿಸಿದರು. ಪ್ರೊ. ಅಮರನಾಥ ಎಸ್ ಕಾರ್ಯಕ್ರಮ ಆಯೋಜಿಸಿದ್ದರು. ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ (ಎ ಐ ಆಂಡ್ ಎಂ ಎಲ್) ಜಂಟಿ ಸಯೋಗದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 150ಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೆಕ್ಯಾನಿಕಲ್ ವಿಭಾಗವು "ಇಂಡಸ್ಟ್ರಿ 4.0 " ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಸಪ್ಟೆಂಬರ್ ಎರಡರಂದು ಆಯೋಜಿಸಿತ್ತು. ಟಾಟಾ ಮೋಟಾರ್ಸ್ ಲಿಮಿಟೆಡ್ ಧಾರವಾಡದ ಹಿರಿಯ ಕಾರ್ಯನಿರ್ವಾಹಕ ಹಾಗೂ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ದೀಪಕ್ ಪಾಟೀಲ್ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಕೈಗಾರಿಕಾ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನಗಳಾದ ಯಂತ್ರ ಕಲಿಕೆ, ಕೃತಕ ಬುದ್ಧಿಮತ್ತೆ ಹಾಗೂ ಐ ಒ ಟಿ ತಂತ್ರಜ್ಞಾನವನ್ನು, ಹೇಗೆ ಸಮರ್ಪಕವಾಗಿ ಬಳಸಲಾಗುತ್ತಿದೆ ಎಂದು ವಿವರಿಸಿದರು. ಯಂತ್ರಗಳ ದಕ್ಷತೆ ಹೆಚ್ಚಿಸಿ, ಮಾಲಿನ್ಯ ತಗ್ಗಿಸಲು ಬಳಸಲಾಗುತ್ತಿರುವ ಉಪಕ್ರಮಗಳ ವಿವರಣೆ ನೀಡಿದರು. ವಿಭಾಗ ಮುಖ್ಯಸ್ಥ ಡಾ. ಕೆ ಎಸ್ ಪೂಜಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ ಕೈಗಾರಿಕಾ ಕ್ಷೇತ್ರದಲ್ಲಿನ ನೂತನ ಬೆಳವಣಿಗೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಪ್ರೊ. ಗುರುರಾಜ ಸತ್ತಿಗೇರಿ ಸಂಯೋಜಿಸಿದ್ದರು. ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ನಾವಿನ್ಯತಾ ಮಂಡಳಿಯ ಜಂಟಿ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಸಂಶೋಧನಾ ಕ್ಷೇತ್ರದಲ್ಲಿನ ಮಹತ್ತರ ಬೆಳವಣಿಗೆಯ ಕುರಿತಾಗಿ ಅರಿವು ಮೂಡಿಸುವ ಕಾರ್ಯಕ್ರಮವು ಆಗಸ್ಟ್ 29ರಂದು ಜರುಗಿತು. ಭಾರತೀಯ ಸಂಶೋಧನಾ ಮತ್ತು ರಕ್ಷಣಾ ಸಂಸ್ಥೆಯ ಮಾಜಿ ನಿರ್ದೇಶಕರು ಹಾಗೂ ಖ್ಯಾತ ವಿಜ್ಞಾನಿಯಾದ ಎಸ್ ಎ ಕಟ್ಟಿಯವರು ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ವಿದ್ಯಾರ್ಥಿಗಳು ಸಂಶೋಧನಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೇಶದ ಏಳಿಗೆಗೆ ಶ್ರಮಿಸಬೇಕೆಂದು ಹೇಳಿದರು. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಹೊಂದಲು ಇಂಜಿನಿಯರಿಂಗ್ ವಿದ್ಯಾರ್ಥಿಗಳು ವಿನೂತನ ತಂತ್ರಜ್ಞಾನದ ಮುಖಾಂತರ ಸಂಶೋಧನೆಗೆ ಒತ್ತು ನೀಡಬೇಕೆಂದು ಹೇಳಿದರು. ವಿಭಾಗ ಮುಖ್ಯಸ್ಥ ಡಾ. ಮಹೇಂದ್ರ ದೀಕ್ಷಿತ್ ಸ್ವಾಗತಿಸಿದರು. ಡಾ. ನಾಗರಾಜ್ ಭಟ್ ವಂದಿಸಿದರು. ಪ್ರೊ. ರಾಜೇಶ್ವರಿ ಪಿ ನಿರೂಪಿಸಿದರು. 60ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕೈಗಾರಿಕಾ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಬಳಸಲಾಗುತ್ತಿರುವ ತಂತ್ರಜ್ಞಾನದ ಕುರಿತಾಗಿ ವಿದ್ಯಾರ್ಥಿಗಳಿಗೆ ತಿಳಿಸಿ, ಹಾಗೂ ಕೈಗಾರಿಕಾ ಕ್ಷೇತ್ರವು ಎದುರಿಸುತ್ತಿರುವ ಸವಾಲುಗಳ ಪರಿಚಯ ನೀಡಿ ವಿದ್ಯಾರ್ಥಿಗಳು ಈ ದಿಶೆಯಲ್ಲಿ ಕಾರ್ಯ ಪ್ರವೃತ್ತರಾಗಲು ಇಂತಹ ಕಾರ್ಯಗಾರಗಳನ್ನು ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


Powered By KHUSHIHOST ® | License - ePaperCloud.com